DTE-ADMIOEST(13)/16/2024-JD-DEPT TECH EDUCATION

I/606098/2024

ಕರ್ನಾಟಕ ಸರ್ಕಾರ

ಸಂ: ಡಿಟಿಇ/16/ಇಎಸ್ ಟಿ (13)/2024 /267

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು - 560001,
ದಿನಾಂಕ: 18.04.2024.

# ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ದಿನಾಂಕ:01-04-2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರಿ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

**ಉಲ್ಲೇಖ:** ಸರ್ಕಾರಿ ಆದೇಶ ಸಂಖ್ಯೆ; ಆಇ-ಪಿಇಎನ್/99/2023, ಬೆಂಗಳೂರು.
ದಿನಾಂಕ: 24.01.2024.

.......

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:01-04-2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರಿ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಸಂಬಂಧಪಟ್ಟ ಸರ್ಕಾರಿ ನೌಕರರಿಂದ ಅಭಿಮತ ಪಡೆದು ಕ್ರಮ ಕೈಗೊಳ್ಳುವ ಸಂಬಂಧ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.

1. ದಿನಾಂಕ:01-04-2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರಿ ಸೇವೆಗೆ ಸೇರಿದ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ತಮ್ಮ ಅಭಿಮತವನ್ನು ನಿಗಧಿತ ನಮೂನೆಯಲ್ಲಿ ದಿನಾಂಕ:30-06-2024ರೊಳಗೆ ಸಕ್ಷಮ ನೇಮಕಾತಿ ಪ್ರಾಧೀಕಾರಕ್ಕೆ ನೇರವಾಗಿ ಸಲ್ಲಿಸತಕ್ಕದ್ದು, ಈ ಅಯ್ಕೆಯನ್ನು ಒಂದು ಬಾರಿಗೆ ಮಾತ್ರ ಚಲಾಯಿಸಲು ಅವಕಾಶವಿರುತ್ತದೆ.
2. ಒಂದು ಬಾರಿ ಮಾಡಿಕೊಂಡ ಆಯ್ಕೆಯನ್ನು ಬದಲಾಯಿಸಲು ಅವಕಾಶವಿಲ್ಲ
3. ಮೇಲಿನ 1 ರಂತೆ ಆಯ್ಕೆಯನ್ನು ಚಲಾಯಿಸಲು ಅರ್ಹ ಸರ್ಕಾರಿ ನೌಕರರು ನಿಗಧಿತ ದಿನಾಂಕದೊಳಗೆ ತಮ್ಮ ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಮುಂದುವರೆಯುತ್ತಾರೆ.
4. ದಿನಾಂಕ: 01-04-2006ರ ಪೂರ್ವದಲ್ಲಿನ ರಾಜ್ಯ ಸಿವಿಲ್ ಸೇವೆಯಲ್ಲಿನ ಖಾಲಿ ಹುದ್ದೆಗಳಿಗೆ ಹೊರಡಿಸಲಾದ ನೇಮಕಾತಿ ಅಧಿಸೂಚನೆಯನ್ವಯ ಆಯ್ಕೆಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ತದನಂತರ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಸರ್ಕಾರದ ಅನ್ಯ ಇಲಾಖೆಯಲ್ಲಿನ ಹುದ್ದೆಗೆ ನೇಮಕಾತಿ ಹೊಂದಿದ್ದು, ಅರ್ಹ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆ ಸೌಲಭ್ಯ ಪಡೆದುಕೊಳ್ಳಲು

ಇಚ್ಛಿಸಿದಲ್ಲಿ ಮನವಿಯನ್ನು ಹಿಂದಿನ ನೇಮಕಾತಿ ಪ್ರಾಧಿಕಾರಕ್ಕೆ ದಿನಾಂಕ: 30-06-2024ರೊಳಗಾಗಿ ಸಲ್ಲಿಸತಕ್ಕದ್ದು ನೇಮಕಾತಿ ಪ್ರಾಧಿಕಾರವು ಅಂತಹ ಸರ್ಕಾರಿ ನೌಕರನು ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಅನ್ಯ ಇಲಾಖೆಗೆ ಆಯ್ಕೆಯಾದ ಹುದ್ದೆಗೆ ವರದಿ ಮಾಡಿಕೊಳ್ಳವ ಸಲುವಾಗಿ ಬಿಡುಗಡೆ ಹೊಂದಿರುವುದನ್ನು ಹಾಗೂ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಅರ್ಹತೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಮುಂದಿನ ಕ್ರಮವಹಿಸತಕ್ಕದ್ದು ಎಂದು ತಿಳಿಸಲಾಗಿದೆ.

ಆದ್ದರಿಂದ ಇಚ್ಛೆಯುಳ್ಳ ಎಲ್ಲಾ ಅರ್ಹ ನೌಕರರು ಅಂತಿಮ ದಿನಾಂಕದವರೆಗೂ ಕಾಯದೆ ಈ ಪತ್ರಕ್ಕೆ ಲಗತ್ತಿಸಿದ ಅನುಬಂಧದ ನಮೂನೆಯಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ತಮ್ಮ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದೆ.

ತಮ್ಮ ನಂಬುಗೆಯ

Signed by
Prasanna H
Date: 15-05-2024 15:23:27
ನಿರ್ದೇಶಕರು

ಇವರಿಗೆ,

ಪ್ರಾಂಶುಪಾಲರು ಸರ್ಕಾರಿ ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ ಇವರಿಗೆ ಮಾಹಿತಿಗಾಗಿ ಇಲಾಖಾ ವೆಬ್ ಸೈಟ್ ಮುಖಾಂತರ.

**ಸರ್ಕಾರಿ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ಕ್ಕೆ ಅನುಬಂಧ**

## ನಮೂನೆ

ರವರಿಗೆ,

*(ಅಧಿಕಾರಿ/ನೌಕರರ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರ)*

.............................. ಇಲಾಖೆ,

.............................

ಮಾನ್ಯರೇ,

ವಿಷಯ: ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಉಲ್ಲೇಖ: ಸರ್ಕಾರಿ ಆದೇಶ ಸಂ: ಆಇ-ಪಿಇಎನ್/99/2023, ದಿನಾಂಕ: 24.01.2024

.............................. ಇಲಾಖೆಯಲ್ಲಿ .............................. ಆಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ/ಶ್ರೀಮತಿ.............................. ಆದ ನಾನು, ಪ್ರಪ್ರಥಮವಾಗಿ .............................. ಇಲಾಖೆಯಲ್ಲಿ .............................. ಹುದ್ದೆಗೆ ದಿನಾಂಕ:.......................... ರಂದು ಸರ್ಕಾರಿ ಸೇವೆಯಲ್ಲಿ ವರದಿ ಮಾಡಿಕೊಂಡಿರುತ್ತೇನೆ. ಈ ಹುದ್ದೆಗೆ ನೇಮಕಾತಿ ಅಧಿಸೂಚನೆಯ ಪ್ರಕಟಣೆಯನ್ನು ದಿನಾಂಕ: .......................... ರಂದು ಹೊರಡಿಸಲಾಗಿರುತ್ತದೆ. ನಾನು ಉಲ್ಲೇಖಿತ ಆದೇಶದನ್ವಯ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಲು ಅರ್ಹವಿರುವುದರಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ನನ್ನ ಅಭಿಮತವನ್ನು ಈ ಮೂಲಕ ತಿಳಿಸುತ್ತಾ, ಈ ಕೆಳಕಂಡ ಮಾಹಿತಿ / ದಾಖಲೆಗಳನ್ನು ಇದರೊಂದಿಗೆ ಸಲ್ಲಿಸುತ್ತಿದ್ದೇನೆ:

01 ಹುದ್ದೆಗಳ ಭರ್ತಿಗಾಗಿ ಪ್ರಕಟಿಸಲಾದ ನೇಮಕಾತಿ ಅಧಿಸೂಚನೆ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ.

02 ಸಂಬಂಧಪಟ್ಟ ಆಯ್ಕೆ ಪಟ್ಟಿ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ.

03 ನೇಮಕಾತಿ ಆದೇಶ ದಿನಾಂಕ:................ರ ಪ್ರತಿಯನ್ನು ಲಗತ್ತಿಸಿದೆ

04 ನೇಮಕಾತಿಯ ನಂತರ ಇಲಾಖೆ ಬದಲಾವಣೆಯಾಗಿದೆಯೇ? ವಿವರಗಳನ್ನು ನೀಡುವುದು

05 ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿ/ಇಲಾಖೆಯ ವಿಳಾಸ:

06 ಕೆಜಿಐಡಿ ಸಂಖ್ಯೆ :

07 NPS ಪ್ರಾನ್ ಸಂಖ್ಯೆ:

08 ಪ್ರಸ್ತುತ ವೇತನ ಚೀಟಿ:

*(ಸಹಿ ಮತ್ತು ಹೆಸರು)*

ದಿನಾಂಕ: